# ಆಶೀರ್ವಾದ ವಾಗ್ದಾನ ಗಳು

1. ನಮ್ಮ ಕರ್ತನಾದ ಯೇಸು ಕ್ರಿಸ್ತನ ದೇವರೂ ತಂದೆಯೂ ಆಗಿರುವಾತನಿಗೆ ಸ್ತೋತ್ರ. ಆತನು ಪರಲೋಕದಲ್ಲಿನ ಸಕಲ ಆತ್ಮೀಯ ಆಶೀರ್ವಾದ ಗಳನ್ನು ನಮಗೆ ಕ್ರಿಸ್ತನಲ್ಲಿ ಅನುಗ್ರಹಿಸಿದ್ದಾನೆ. (ಎಫೆಸದ 1:3)

2. ಕರ್ತನ ಆಶೀರ್ ವಾದವು ಐಶ್ವರ್ಯವನ್ನುಂಟು ಮಾಡುವದು. ಅದ ರೊಂದಿಗೆ ಆತನು ಯಾವ ದುಃಖವನ್ನೂ ಸೇರಿಸುವ ದಿಲ್ಲ. (ಜ್ಞಾನೋಕ್ತಿ10:22)

3. ಕ್ರಿಸ್ತನು ನಮ್ಮ ನಿಮಿತ್ತ ಶಾಪವಾಗಿ ಮಾಡಲ್ಪಟ್ಟು ನ್ಯಾಯಪ್ರಮಾಣದ ಶಾಪದೊಳಗಿಂದ ನಮ್ಮನ್ನು ಬಿಡಿಸಿದನು. ಯಾಕಂದರೆ--ಮರಕ್ಕೆ ತೂಗಹಾಕಲ್ಪಟ್ಟ ಪ್ರತಿಯೊಬ್ಬನು ಶಾಪಗ್ರಸ್ತನು ಎಂದು ಬರೆದದೆಯಲ್ಲಾ. ಅಬ್ರಹಾಮನಿಗೆ ಉಂಟಾದ ಆಶೀರ್ವಾದವು ಯೇಸು ಕ್ರಿಸ್ತನ ಮೂಲಕ ಅನ್ಯಜನರಿಗೆ ಉಂಟಾಗು ವಂತೆ ದೇವರು ವಾಗ್ದಾನ ಮಾಡಿದ ಆತ್ಮನು ನಮಗೆ ನಂಬಿಕೆಯ ಮೂಲಕ ದೊರಕುವಂತಾಯಿತು. (ಗಲಾತ್ಯದ 3:13-14)

4. ನಾನು ನಿನ್ನನ್ನು ದೊಡ್ಡ ಜನಾಂಗವಾಗ ಮಾಡಿ ನಿನ್ನನ್ನು ಆಶೀರ್ವದಿಸಿ ನಿನ್ನ ಹೆಸರನ್ನು ದೊಡ್ಡ ದಾಗಿ ಮಾಡುವೆನು, ನೀನು ಆಶೀರ್ವಾದವಾಗಿರುವಿ. ನಿನ್ನನ್ನು ಆಶೀರ್ವದಿಸುವವರನ್ನು ಆಶೀರ್ವದಿಸು ವೆನು. ನಿನ್ನನ್ನು ಶಪಿಸುವವರನ್ನು ಶಪಿಸುವೆನು; ನಿನ್ನಲ್ಲಿ ಭೂಮಿಯ ಎಲ್ಲಾ ಜನಾಂಗಗಳು ಆಶೀರ್ವದಿಸಲ್ಪಡು ವವು ಎಂದು ಹೇಳಿದನು. (ಆದಿಕಾಂ 12:2-3)

5. ದುಷ್ಟತ್ವವು ಪಾಪಿಗಳನ್ನು ಹಿಂದಟ್ಟುತ್ತದೆ; ನೀತಿ ವಂತರಿಗೆ ಒಳ್ಳೇದು ಪ್ರತಿಫಲವಾಗುವದು. (ಜ್ಞಾನೋಕ್ತಿ 13:22)

6. ನಿನ್ನ ದೇವ ರಾದ ಕರ್ತನನ್ನು ಜ್ಞಾಪಕಮಾಡಿಕೊಳ್ಳಬೇಕು; ಈ ಹೊತ್ತು ಇರುವಂತೆ ನಿನ್ನ ಪಿತೃಗಳಿಗೆ ಪ್ರಮಾಣಮಾಡಿದ ತನ್ನ ಒಡಂಬಡಿಕೆಯನ್ನು ಸ್ಥಾಪಿಸುವ ಹಾಗೆ ಆಸ್ತಿಯನ್ನು ಸಂಪಾದಿಸುವ ಬಲವನ್ನು ನಿನಗೆ ಕೊಡುವಾತನು ಆತನೇ. (ಧರ್ಮೋಪದೇಶ 8:18)

7. ನಿನ್ನ ಕಣಜಗಳಲ್ಲಿಯೂ ನೀನು ಕೈಹಾಕುವ ಎಲ್ಲಾದರಲ್ಲಿಯೂ ನಿನಗೆ ಆಶೀರ್ವಾದ ಬರುವ ಹಾಗೆ ಕರ್ತನು ಅಪ್ಪಣೆಕೊಡುವನು; ನಿನ್ನ ದೇವರಾದ ಕರ್ತನು ನಿನಗೆ ಕೊಡುವ ಭೂಮಿಯಲ್ಲಿ ಆಶೀರ್ವಾದ ಕೊಡುವನು. (ಧರ್ಮೋಪದೇಶ 28:8)

8. ಕರ್ತನು ಆಕಾಶ ವೆಂಬ ತನ್ನ ಒಳ್ಳೆ ಉಗ್ರಾಣವನ್ನು ನಿನಗೆ ತೆರೆದು ನಿನ್ನ ಭೂಮಿಗೆ ತಕ್ಕ ಕಾಲದಲ್ಲಿ ಮಳೆಯನ್ನು ಕೊಟ್ಟು ನಿನ್ನ ಕೈಕೆಲಸವನ್ನೆಲ್ಲಾ ಆಶೀರ್ವದಿಸುವನು; ನೀನು ಸಾಲ ತಕ್ಕೊಳ್ಳದೆ ಬಹಳ ಜನಾಂಗಗಳಿಗೆ ಸಾಲ ಕೊಡುವಿ. ನಾನು ಈಹೊತ್ತು ನಿನಗೆ ಆಜ್ಞಾಪಿಸುವ ನಿನ್ನ ದೇವರಾದ ಕರ್ತನ ಆಜ್ಞೆಗಳನ್ನು ನೀನು ಕೇಳಿ ಕಾಪಾಡಿ ಕೈಕೊಂಡರೆ ಕರ್ತನು ನಿನ್ನನ್ನು ಬಾಲವನ್ನಲ್ಲ, ತಲೆಯಾಗಿ ಮಾಡುವನು; ನೀನು ಕೆಳಗಲ್ಲ, ಮೇಲೆಯೇ ಇರುವಿ. (ಧರ್ಮೋಪದೇಶ 28:12-13)

9. ಅವನು ನಫ್ತಾಲಿಯ ವಿಷಯವಾಗಿ--ಓ ನಫ್ತಾಲಿಯೇ, ಅನುಗ್ರಹದಿಂದ ತೃಪ್ತನೇ, ಕರ್ತನ ಆಶೀರ್ವಾದದಿಂದ ತುಂಬಿದವನೇ, ಪಶ್ಚಿಮವನ್ನೂ ದಕ್ಷಿಣವನ್ನೂ ಸ್ವಾಧೀನಮಾಡಿಕೋ ಎಂದು ಹೇಳಿದನು. (ಧರ್ಮೋಪದೇಶ 33:23)

10. ಅವರನ್ನೂ ನನ್ನ ಪರ್ವತಗಳ ಸುತ್ತಣ ಪ್ರದೇಶಗಳನ್ನೂ ಆಶೀರ್ವದಿ ಸುವೆನು, ಕಾಲಕ್ಕೆ ಸರಿಯಾಗಿ ಮಳೆಯನ್ನು ಸುರಿಸುವೆನು; ದಿವ್ಯಾಶೀರ್ವಾದದ ಮಳೆಯಾಗುವದು; (ಯೆಹೆಜ್ಕೇ 34:26)

11. ನೀವು ಒಪ್ಪಿ ವಿಧೇಯರಾದರೆ ದೇಶದ ಮೇಲನ್ನು ಅನುಭವಿಸುವಿರಿ; (ಯೆಶಾಯ 1:19)

12. ಮನುಷ್ಯರು ನಮ್ಮ ತಲೆಗಳ ಮೇಲೆ ಸವಾರಿ ಮಾಡುವಂತೆ ಮಾಡಿದ್ದೀ. ನಾವು ಬೆಂಕಿಯಲ್ಲಿಯೂ ನೀರಿನಲ್ಲಿಯೂ ದಾಟಿದೆವು; ಆದರೆ ನೀನು ನಮ್ಮನ್ನು ಐಶ್ವರ್ಯದ ಸ್ಥಳಕ್ಕೆ ಬರಮಾಡಿದ್ದೀ; (ಕೀರ್ತನೆ 66:12)